ಕೊಡಗಿನ ಪ್ರೇಕ್ಷಣೀಯ ಸ್ಥಳಗಳು

2226-ಶ್ರೀ ಎಂ. ಪಿ. ಅಪ್ಪಚ್ಚು ರಂಜನ್ (ಸೋಮವಾರಪೇಟೆ): **ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?**

ಅ) ಕೊಡಗಿನಲ್ಲಿ ಯಾವ ಯಾವ ಸ್ಥಳಗಳನ್ನು ಪ್ರೇಕ್ಷಣೀಯ ಸ್ಥಳಗಳೆಂದು ಗುರ್ತಿಸಲಾಗಿದೆ? (ಅವುಗಳ ವಿವರ ನೀಡುವುದು).

ಆ) ಅವುಗಳ ಅಭಿವೃದ್ಧಿಗಾಗಿ ಕೈಗೊಂಡ ಕ್ರಮಗಳೇನು?

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಕೊಡಗು ಜಿಲ್ಲೆಯಲ್ಲಿ ಈ ಕೆಳಕಂಡ ಸ್ಥಳಗಳನ್ನು ಪ್ರವಾಸೋದ್ಯಮ ಸ್ಥಳಗಳೆಂದು ಗುರ್ತಿಸಲಾಗಿದೆ.

1. ಮಡಿಕೇರಿ 2. ಅಬ್ಬೆ ಫಾಲ್ಸ್ 3. ತಲಕಾವೇರಿ 4. ನಾಲ್ಕನಾಡು 5. ಭಾಗಮಂಡಲ 6. ಹಾರಂಗಿ ಪ್ರಾಜೆಕ್ಟ್ 7. ಕೂಡಿಗೆ 8. ಚಟ್ಟಹಳ್ಳಿ 9. ನಿಸರ್ಗಧಾಮ 10. ನಾಗರಹೊಳೆ 11. ಇರುಪು

ಆ)

1. 1997-98ನೇ ಸಾಲಿನಲ್ಲಿ ತಲಕಾವೇರಿ ಹಾಗೂ ಭಾಗಮಂಡಲಗಳ ಸಮಗ್ರ ಅಭಿವೃದ್ಧಿಗಾಗಿ ರೂ. 50.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಅವರಿಗೆ ಬಿಡುಗಡೆ ಮಾಡಿದೆ. ಕಾಮಗಾರಿಗಳ ಅಂದಾಜು ಪಟ್ಟಿ ತಯಾರಿಸಿದ ನಂತರ ಕೆಲಸವನ್ನು ಪ್ರಾರಂಭಿಸಲಾಗುವುದು.
2. 1996-97ನೇ ಸಾಲಿನಲ್ಲಿ ಮಡಿಕೇರಿ ರಾಜಾಸೀಟ್ ನ ಲ್ಯಾಂಡ್ ಸ್ಕೇಪ್ ಗಾಗಿ ರೂ. 5.00 ಲಕ್ಷ ಬಿಡುಗಡೆ ಮಾಡಲಾಗಿದೆ.
3. ಮಡಿಕೇರಿಯ ಅಬ್ಬೆಫಾಲ್ಸ್ ಲಿಂಕ್ ರಸ್ತೆ ಅಭಿವೃದ್ಧಿಗೆ ರೂ. 5.00 ಲಕ್ಷ ಬಿಡುಗಡೆ ಮಾಡಲಾಗಿದೆ.
4. ಮಡಿಕೇರಿಯಲ್ಲಿ ರೂ. 20.00ಲಕ್ಷ ಅಂದಾಜು ವೆಚ್ಚದ ಪ್ರವಾಸಿ ಮಾಹಿತಿ ಕಛೇರಿ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.
5. 1998-99ನೇ ಸಾಲಿನಲ್ಲಿ ಮಡಿಕೇರಿ ಗಾಲ್ಫ್ ಕೋರ್ಸ್ ಅಭಿವೃದ್ಧಿಗೆ ರೂ. 30.00 ಲಕ್ಷಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ಆಧ್ಯತಾ ಪಟ್ಟಿಯಲ್ಲಿರುತ್ತದೆ.

ವಿರಾಜಪೇಟೆ ತಾಲ್ಲೂಕಿನ ಬಾಳುಗೋಡುವಿನ ಜಂಗಲ್ ಕ್ಯಾಂಪ್ ರೆಸಾರ್ಟ್ ಪುನರ್ ಆರಂಭ.

2229 - ಶ್ರೀ ಹೆಚ್.ಡಿ. ಬಸವರಾಜು (ವಿರಾಜಪೇಟೆ) : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ತಾಲ್ಲೂಕಿನ ಬಾಳಗೋಡುವಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ